ಸಂಯುಕ್ತ ಕರ್ನಾಟಕ



ಬೆಂಗಳೂರಿನ ಶಿವರಾತ್ರೀಶ್ವರ ಕೇಂದ್ರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಬಸವೇಶ್ವರರ ಭಾವ ಚಿತ್ರಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪುಷ್ಪಾರ್ಚನೆ ಮಾಡಿದರು. ಸುತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಸಿ.ಸೋಮಶೇಖರ್ ಹಾಗೂ ಇತರರು ಪಾಲ್ಗೊಂಡಿದ್ದರು.

ಜನದನಿಯ ಸಾರಥಿ
ವಾರ್ತಾ ಭಾರತಿ

# ಬಸವಣ್ಣ, ಅಂಬೇಡ್ಕರ್ ಒಂದು ಜಾತಿಗೆ ಸೀಮಿತವಲ್ಲ: ಬಸವರಾಜ ಹೊರಟ್ಟಿ

ಬೆಂಗಳೂರು, ಮೇ 13: ಬಸವಣ್ಣ ಮತ್ತು ಡಾ.ಅಂಬೇಡ್ಕರ್ ಅವರನ್ನು ಒಂದು ಜಾತಿಗೆ ಸೀಮಿತಗೊಳಿಸಲಾಗಿದೆ. ಅವರನ್ನು ಕೇವಲ ಒಂದು ಜಾತಿಗೆ ಸೀಮಿತವಲ್ಲ. ಎಲ್ಲಿಯವರೆಗೆ ತಮ್ಮ ಸ್ವಾರ್ಥಕ್ಕಾಗಿ ಬಸವಣ್ಣ ಮತ್ತು ಅಂಬೇಡ್ಕರ್ ಅವರನ್ನು ಬಳಸಿಕೊಳ್ಳಲಾಗುತ್ತದೆಯೋ ಅಲ್ಲಿಯವರೆಗೆ ದೇಶ ಉದ್ಧಾರ ಆಗುವುದಿಲ್ಲ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಸೋಮವಾರ ಜಯನಗರದಲ್ಲಿರುವ ಶಿವರಾತ್ರೀಶ್ವರ ಕೇಂದ್ರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಕ್ಕದ ರಾಜ್ಯ, ಮಹಾರಾಷ್ಟ್ರ ಸೇರಿದಂತೆ ಇಡಿ ದೇಶದಲ್ಲಿ ಬಸವಣ್ಣ ಅವರ ಅಪಾರ ಅನುಯಾಯಿಗಳಿದ್ದಾರೆ. ದೇಶದ ಪ್ರಜಾಪ್ರಭುತ್ವಕ್ಕೆ ಅಡಿಪಾಯ ಹಾಕಿದವರು ಅಲ್ಲಮಪ್ರಭು ಮತ್ತು ಬಸವಣ್ಣ ಅವರು.



12ನೇ ಶತಮಾನದಲ್ಲಿ ಕೆಳಜಾತಿಯವರು ಮನೆಯ ಮುಂದೆ ಹೋದರೆ ನೀರು ಹಾಕುತಿದ್ದ ಕಾಲದಲ್ಲಿ ಅಂತರ್‌ಜಾತಿ ವಿವಾಹವನ್ನು ಮಾಡಿಸಿದರು ಎಂದು ಹೇಳಿದರು.

ಸುತ್ತೂರು ವೀರಸಿಂಹಾಸನ ಮಠದ ಶಿವರಾತ್ರಿ, ದೇಶಿಕೇಂದ್ರ, ಸ್ವಾಮೀಜಿ ಮಾತನಾಡಿ, ಸಮಾಜದಲ್ಲಿರುವ ಅನೇಕ ಸಮಸ್ಯೆಗಳಿಗೆ 12ನೆ ಶತಮಾನದಲ್ಲೇ ಬಸವಣ್ಣ ಅವರು ಪರಿಹಾರ ಮಾರ್ಗಗಳನ್ನು ಸೂಚಿಸಿದ್ದಾರೆ. ಎಲ್ಲರೂ ಧಾರ್ಮಿಕ, ಆಧ್ಯಾತ್ಮಿಕ ಆಚರಣೆ ಮಾಡಲು ಅವಕಾಶವಿದೆ ಎಂಬುದನ್ನು ಬಸವಣ್ಣ ಅವರು ತಿಳಿಸಿದರು. ಅವರ ವಚನಗಳು ತುಂಬಾ ಸರಳವಾಗಿದ್ದು, ಪ್ರತಿ ವಚನ ಮನುಷ್ಯನ ಆತ್ಮ ಪ್ರಜ್ಞೆಯನ್ನು ಜಾಗೃತಗೊಳಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಹಂಪಿ ಕನ್ನಡ ವಿವಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ, ಆಧ್ಯಾತ್ಮಿಕ ಚಿಂತಕಿ ವೀಣಾ ಬನ್ನಂಜೆ, ಬೆಂಗಳೂರು ನಗರಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ವಿ.ನಾಗರಾಜಮೂರ್ತಿ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಪ್ರಮೀಳಾ ಗರಡಿ, ಪ್ರಧಾನ ಕಾರ್ಯದರ್ಶಿ ಸೋಮಶೇಖರ ಶಿ.ಗಾಂಜಿ ಮತ್ತಿತರರು ಉಪಸ್ಥಿತರಿದ್ದರು.

> “ಒಂದೊಂದು ಸಂದರ್ಭದಲ್ಲಿ ಒಂದೊಂದು ಕ್ರಾಂತಿಗಳಾಗಿವೆ. ಎಲ್ಲವನ್ನು ಸೇರಿಸಿ ಏಕಕಾಲಕ್ಕೆ ಬಹುದೊಡ್ಡ ಕ್ರಾಂತಿ ಮಾಡಿದವರು ಬಸವಣ್ಣ ಅವರು. ಅಸಮಾನತೆಯ ಕಾಲದಲ್ಲಿ ಮಾನವ ಕುಲದ ಉದ್ಧಾರಕ್ಕಾಗಿ ಕೆಲಸ ಮಾಡಿದರು. ಸಕಲ ಜೀವಾತ್ಮರಿಗೆ ಲೇಸನ್ನು ಬಯಸುವ ಸಮಾಜ ನಿರ್ಮಾಣಕ್ಕೆ ಕಾರಣರಾದರು. ಆ ನಿಟ್ಟಿನಲ್ಲಿ ಜೀವನ ಸಂವಿಧಾನವನ್ನು ಬಸವಣ್ಣ ಅವರು ಕೊಟ್ಟಿದ್ದಾರೆ.
>
> -ಡಾ.ಸಿ.ಸೋಮಶೇಖರ್, ಅಧ್ಯಕ್ಷ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್

> “ಇಂದು ಕೆಲವರು ಬಸವಣ್ಣ ಅವರ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಳ್ಳದೇ ಕಾಟಾಚಾರಕ್ಕೆ ಬಸವ ಜಯಂತಿಯನ್ನು ಆಚರಿಸುತ್ತಾರೆ. ಬಸವಣ್ಣ ಅವರ ತತ್ವವನ್ನು ಅಳವಡಿಸಿಕೊಂಡು, ಅವರ ಹಾದಿಯಲ್ಲಿ ನಡೆದರೆ ಸಮೃದ್ಧವಾದ ಕರ್ನಾಟಕವನ್ನು ನಿರ್ಮಾಣ ಮಾಡಬಹುದು.
>
> -ಬಸವರಾಜ ಹೊರಟ್ಟಿ, ಸಭಾಪತಿ, ವಿಧಾನ ಪರಿಷತ್

ಕನ್ನಡಪ್ರಭ

# ವಚನ ಸಾಹಿತ್ಯದಿಂದ ಮನದೊಳಗಿನ ದ್ವಂದ್ವಗಳ ನಿವಾರಣೆ: ಸುತ್ತೂರು ಶ್ರೀ

• **ಕನ್ನಡಪ್ರಭ ವಾರ್ತೆ**, ಬೆಂಗಳೂರು

ಬಸವಾದಿ ಶರಣರ ವಚನ ಸಾಹಿತ್ಯ ಆತ್ಮಪ್ರಜ್ಞೆ, ಜಾಗೃತಿ ಹಾಗೂ ಮನಸ್ಸಿನ ದ್ವಂದ್ವಗಳನ್ನು ನಿವಾರಿಸುವ ಶಕ್ತಿ ಹೊಂದಿದೆ ಎಂದು ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿ ಹೇಳಿದರು.

ಸೋಮವಾರ ಜಯನಗರದ ಶಿವರಾತ್ರೀಶ್ವರ ಕೇಂದ್ರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಹಾಗೂ ಬೆಂಗಳೂರು ನಗರ ಘಟಕ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ಬಸವ ಜಯಂತಿ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತ ಧಾರ್ಮಿಕ ಹಾಗೂ ಆಧ್ಯಾತ್ಮಿಕತೆಯಲ್ಲಿ ಶ್ರೀಮಂತ ದೇಶ. ಆಧ್ಯಾತ್ಮಿಕತೆ ಪ್ರತಿಯೊಬ್ಬ ಮನುಷ್ಯನ ಅವಿಭಾಜ್ಯ ಅಂಗ. ಆಧ್ಯಾತ್ಮಿಕತೆಯಿಂದ ಕೂಡಿದ ಬಸವಾದಿ ಶರಣರ ವಚನಗಳು, ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದರು.

ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಬಸವಣ್ಣ, ಅಂಬೇಡ್ಕರ್‌ರಂತಹ ಮಹಾನ್ ನಾಯಕರು ಜಾತ್ಯಾತೀತವಾಗಿ ಸಮಾನತೆ ಹಾಗೂ ಅಸ್ಪೃಶ್ಯತೆ ನಿವಾರಣೆಗೆ ಶ್ರಮಿಸಿದವರು. ಅನ್ಯಾಯದ ವಿರುದ್ಧ ಕ್ರಾಂತಿ ಮಾಡಿದವರು. ಇಂತಹ ಆದರ್ಶ ವ್ಯಕ್ತಿಗಳ ತತ್ವ ಸಿದ್ಧಾಂತಗಳನ್ನು ಯುವಜನರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ. ಪರಶಿವಮೂರ್ತಿ, ಆಧ್ಯಾತ್ಮಿಕ ಚಿಂತಕಿ ಡಾ. ವೀಣಾ ಬನ್ನಂಜೆ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ. ಸೋಮಶೇಖರ್, ಕೆ.ವಿ. ನಾಗರಾಜಮೂರ್ತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಜಯನಗರದ ಶಿವರಾತ್ರೀಶ್ವರ ಕೇಂದ್ರದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ 'ಬಸವ ಜಯಂತಿ' ಕಾರ್ಯಕ್ರಮವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು. ಸುತ್ತೂರು ಮಹಾ ಸಂಸ್ಥಾನ ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆಧ್ಯಾತ್ಮಿಕ ಚಿಂತಕಿ ಡಾ. ವೀಣಾ ಬನ್ನಂಜೆ ಇದ್ದರು.